ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಶಿಕ್ಷಕರನ್ನು ಅನ್ಯ ಇಲಾಖೆಗೆ ನಿಯೋಜನೆ ಮಾಡಿರುವ ಮಾಹಿತಿ ಬಗ್ಗೆ

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ)

137 (1220) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಸಾರ್ವಜನಿಕ ಶಿಕ್ಷಣ ಇಲಾಖೆಯ ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಎಷ್ಟು ಜನ ಶಿಕ್ಷಕರು ಅನ್ಯ ಇಲಾಖೆಯಲ್ಲಿ ನಿಯೋಜನೆ ಮೇರೆಗೆ ಕಾರ್ಯನಿರ್ವಹಿಸುತ್ತಿದ್ದಾರೆ ; (ಹೆಸರು, ನಿಯೋಜನೆಗೊಂಡ ಇಲಾಖೆ ಮತ್ತು ಯಾವ ದಿನಾಂಕದಿಂದ ನಿಯೋಜನೆ ಮೇಲಿರುತ್ತಾರೆ ಎಂಬ ಮಾಹಿತಿ ನೀಡುವುದು)

(ಆ) ಈ ರೀತಿ ಶಿಕ್ಷಕರನ್ನು ನಿಯೋಜನೆಗೊಳಿಸಿದ್ದರೆ, ಮಕ್ಕಳು ಶಿಕ್ಷಣ, ಪಾಠ ಪ್ರವಚನದಿಂದ ವಂಚಿತವಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ನಿಯೋಜನೆಯಿಂದ ಇವರ ಮೂಲ ಇಲಾಖೆಯ ಕೆಲಸ ಕಾರ್ಯಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಏನು ಕ್ರಮ ಕೈಗೊಳ್ಳಲಾಗುವುದು ?